ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 73 ಜಿಪಸ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು,ದಿನಾಂಕ:29-12-2015

## ಸುತ್ತೋಲೆ

**ವಿಷಯ:** ಹಿಂದುಳಿದ ಪ್ರದೇಶಗಳ ಅನುದಾನ ನಿಧಿ (ಬಿ.ಆರ್.ಜಿ.ಎಫ್) ಅಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳನ್ನು ಪೂರ್ಣಗೊಳಿಸುವ ಮತ್ತು ಅನುದಾನದ ವಿನಿಯೋಗದ ಕುರಿತು.

**ಉಲ್ಲೇಖ:**
1. ಭಾರತ ಸರ್ಕಾರದ ವಿತ್ತ ಸಚಿವರ ಪತ್ರಿಕಾ ಹೇಳಿಕೆಗಳು, ದಿನಾಂಕ: 28-02-2015.
2. ಸರ್ಕಾರದ ಆದೇಶ ಸಂಖ್ಯೆ: ಆಇ 02 ಟಿಎಫ್‌ಪಿ 2015, ದಿನಾಂಕ: 09-04-2015.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಕರ್ನಾಟಕ ಸರ್ಕಾರ ಇವರ ಅ.ಸ.ಪ ಸಂಖ್ಯೆ: ಆಇ 02 ಟಿಎಫ್‌ಪಿ 2015, ದಿನಾಂಕ: 18-04-2015.
4. ದಿನಾಂಕ: 16-10-2015ರಂದು ನಡೆದ ರಾಜ್ಯ ಮಟ್ಟದ 2015-16ನೇ ಸಾಲಿನ ಪ್ರಥಮ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡವಳಿಗಳು

* * * *

ರಾಜ್ಯದ ಹಿಂದುಳಿದ ಜಿಲ್ಲೆಗಳಲ್ಲಿ ಅಭಿವೃದ್ಧಿ ಅಂತರಗಳನ್ನು ಹೋಗಲಾಡಿಸುವ ಉದ್ದೇಶದಿಂದ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಜ್ಯಕ್ಕೆ ಪ್ರತಿಶತ ಅನುದಾನವನ್ನು ಒದಗಿಸುವುದರ ಮೂಲಕ ಹಿಂದುಳಿದ ಪ್ರದೇಶಗಳ ಅನುದಾನ ನಿಧಿ (ಬಿ.ಆರ್.ಜಿ.ಎಫ್)ಯೋಜನೆಯನ್ನು ಜಾರಿಗೆ ತಂದಿತ್ತು. ಅದರಂತೆ ಈ ಯೋಜನೆಯು ರಾಜ್ಯದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಅನುಷ್ಠಾನಗೊಂಡಿರುತ್ತದೆ.

ಹಿಂದುಳಿದ ಪ್ರದೇಶಗಳ ಅನುದಾನ ನಿಧಿ (ಬಿ.ಆರ್.ಜಿ.ಎಫ್) ಯೋಜನೆಯನ್ನು 2015-16ನೇ ಆರ್ಥಿಕ ಸಾಲಿನಿಂದ ಭಾರತ ಸರ್ಕಾರದಿಂದ ಅನುದಾನವನ್ನು ಒದಗಿಸಿ ಮುಂದುವರೆಸಲು ಸಾಧ್ಯವಾಗುತ್ತಿಲ್ಲ ಬದಲಾಗಿ ರಾಜ್ಯ ಸರ್ಕಾರಗಳು ಇಚ್ಛಿಸಿದಲ್ಲಿ ಈ ಯೋಜನೆಗೆ ಅನುದಾನಗಳನ್ನು ಒದಗಿಸುವುದರ ಮೂಲಕ ಅನುಷ್ಠಾನವನ್ನು ಮುಂದುವರೆಸಬಹುದೆಂದು ಉಲ್ಲೇಖ (1)ರ ಪತ್ರಿಕಾ ಪ್ರಕಟಣೆಯಲ್ಲಿ ಭಾರತ ಸರ್ಕಾರದ ವಿತ್ತ ಸಚಿವರು ಪ್ರಕಟಿಸಿರುತ್ತಾರೆ.

ರಾಜ್ಯದ 6 ಜಿಲ್ಲೆಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ಹಿಂದುಳಿದ ಪ್ರದೇಶಗಳ ಅನುದಾನ ನಿಧಿ ಯೋಜನೆಯಡಿ 2015-16ಕ್ಕಿಂತ ಹಿಂದಿನ ಆರ್ಥಿಕ ಸಾಲುಗಳಲ್ಲಿ ತಯಾರಿಸಲಾಗಿದ್ದ ಅನುಮೋದಿತ ಕ್ರಿಯಾ ಯೋಜನೆಗಳಲ್ಲಿನ ಬಹುತೇಕ ಕಾಮಗಾರಿಗಳು ಇದುವರೆವಿಗೂ ಪೂರ್ಣಗೊಳ್ಳದಿರುವ ಅಂಶವು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದುದರಿಂದ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ಯಾವುದೇ ಅನುದಾನವನ್ನು 2015-16ನೇ ಆರ್ಥಿಕ ಸಾಲಿನಲ್ಲಿ ಒದಗಿಸದಿದ್ದಾಗ್ಯೂ ಸಹ ಪೂರ್ಣಗೊಳ್ಳದೇ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು 'Exit Plan' ಅಡಿಯಲ್ಲಿ ರೂ.112.00 ಕೋಟಿಗಳ ಅನುದಾನವನ್ನು ಒದಗಿಸಿ ಈ ಅನುದಾನವನ್ನು ವಿನಿಯೋಗಿಸುವ ಆದ್ಯತೆಗಳ ಬಗ್ಗೆ ವಿವರಿಸಿ ಉಲ್ಲೇಖ (2)ರ ಸರ್ಕಾರದ ಆದೇಶವನ್ನು ಹೊರಡಿಸಿರುತ್ತದೆ.

ಹಿಂದುಳಿದ ಪ್ರದೇಶಗಳ ಅನುದಾನ ನಿಧಿ ಯೋಜನೆಯಡಿ ಇದುವರೆಗೆ ಕೈಗೆತ್ತಿಕೊಳ್ಳಲಾದ ಎಲ್ಲಾ ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸುವ ಬಗೆಗಿನ ವಿಚಾರವು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಉಲ್ಲೇಖ (4)ರ ಸಭೆಯಲ್ಲಿ ಪ್ರಸ್ತಾಪವಾಗಿರುತ್ತದೆ. ಶುದ್ಧ ಕುಡಿಯುವ ನೀರು ಘಟಕಗಳ ಸ್ಥಾಪನೆಗಾಗಿ ರಾಜ್ಯದಿಂದ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ರೂ.5.00ಲಕ್ಷಗಳ ಅನುದಾನವನ್ನು ಒದಗಿಸಲಾಗುತ್ತಿದ್ದು ಬಾಕಿ ಅನುದಾನವನ್ನು ವಿಧಾನ ಸಭಾ ಸದಸ್ಯರ ಮತ್ತು ಲೋಕಸಭಾ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ, 14ನೇ ಹಣಕಾಸು ಆಯೋಗದ ಅನುದಾನ ಹಾಗೂ ಗ್ರಾಮ ಪಂಚಾಯತಿಳ ಸ್ವಂತ ಸಂಪನ್ಮೂಲ ಸಂಗ್ರಹಣೆಯಲ್ಲಿ ವೆಚ್ಚ ಭರಿಸಿ ಪೂರ್ಣಗೊಳಿಸಬಹುದಾಗಿದೆ. ಹಿಂದುಳಿದ ಪ್ರದೇಶಗಳ ಅನುದಾನ ನಿಧಿ ಯೋಜನೆ ಅನುಷ್ಠಾನಗೊಳ್ಳುತ್ತಿರುವ 6 ಜಿಲ್ಲೆಗಳಲ್ಲಿ ಮಾತ್ರ ಹಿಂದುಳಿದ

ಪ್ರದೇಶಗಳ ಅನುದಾನ ನಿಧಿ ಬಳಸಿಕೊಂಡು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಅಗತ್ಯ ಕ್ರಮ ವಹಿಸುವ ಬಗ್ಗೆ ಸೂಚನೆಗಳನ್ನು ಹೊರಡಿಸುವಂತೆ ನಿರ್ಣಯಿಸಿರುತ್ತದೆ.

ರಾಜ್ಯದ 6 ಜಿಲ್ಲೆಗಳಲ್ಲಿ ಹಿಂದುಳಿದ ಪ್ರದೇಶಗಳ ಅನುದಾನ ನಿಧಿ ಯೋಜನೆಯಡಿ ಇದುವರೆಗೆ ಕೈಗೆತ್ತಿಕೊಳ್ಳಲಾದ ಅಪೂರ್ಣಗೊಂಡಿರುವ ಕಾಮಗಾರಿಗಳನ್ನು 2015-16ನೇ ಆರ್ಥಿಕ ಸಾಲಿನಲ್ಲಿ 'Exit Plan' ಅಡಿಯಲ್ಲಿ ಹಂಚಿಕೆ ಮಾಡಿರುವ ಅನುದಾನವನ್ನು ಬಳಸಿಕೊಂಡು ಪೂರ್ಣಗೊಳಿಸುವ ಹಾಗೂ ಅಗತ್ಯವಿರುವೆಡೆ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಅನುದಾನವನ್ನು ಬಳಸಿಕೊಳ್ಳುವ ಬಗ್ಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದೆ. ಅಂತೆಯೇ 2015-16ನೇ ಆರ್ಥಿಕ ಸಾಲಿನಲ್ಲಿ ಈ ಯೋಜನೆಯಡಿ ಯಾವುದೇ ಹೊಸ ಕ್ರಿಯಾ ಯೋಜನೆ ಅಥವಾ ಹೊಸ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದನ್ನು ನಿಷೇಧಿಸಿದೆ. ಹಿಂದುಳಿದ ಪ್ರದೇಶಗಳ ಅನುದಾನ ನಿಧಿ ಯೋಜನೆಯ ಅನುಷ್ಠಾನಕ್ಕೆ ಪೂರಕವಾಗಿ ಬಾಹ್ಯ ಸಂಪನ್ಮೂಲದಿಂದ (ಹೊರಗುತ್ತಿಗೆಯಲ್ಲಿ) ಪಡೆಯಲಾದ ಎಲ್ಲಾ ಮಾನವ ಸಂಪನ್ಮೂಲ ಸೇವೆಗಳನ್ನು 2015-16ನೇ ಆರ್ಥಿಕ ಸಾಲಿನ ಅಂತ್ಯದೊಳಗಾಗಿ (ದಿನಾಂಕ:31-03-2016ರೊಳಗಾಗಿ) ಕಡ್ಡಾಯವಾಗಿ ತೆಗೆದು ಹಾಕುವಂತೆ ತಿಳಿಸಿದೆ.

29/12

(ಎಂ.ಬಿ.ಧೋತ್ರೆ)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

29.12.15

**ಇವರಿಗೆ,**

1. ಜಿಲ್ಲಾಧಿಕಾರಿಗಳು, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳು.
3. ಕಾರ್ಯನಿರ್ವಾಹಕ ಅಧಿಕಾರಿಗಳು, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿನ ಎಲ್ಲಾ ತಾಲ್ಲೂಕು ಪಂಚಾಯತಿಗಳು. – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ
4. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿನ ಎಲ್ಲಾ ಗ್ರಾಮ ಪಂಚಾಯತಿಗಳು.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳ
3. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು.
4. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ (ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ) ಲಲಿತ ಮಹಲ್ ರಸ್ತೆ, ಮೈಸೂರು.
5. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ನಿರ್ದೇಶಕರು (ಪಂ.ರಾಜ್-2), ಇವರ ಆಪ್ತ ಸಹಾಯಕರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ನಿರ್ದೇಶಕರು, ಯೋಜನಾ ಉಸ್ತುವಾರಿ ಹಾಗೂ ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ವೆಬ್ ಸೈಟ್, ಕರ್ನಾಟಕ ವಿಕಾಸ ಹಾಗೂ ಶಾಖಾ ರಕ್ಷಾ ಕಡತ.